# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ –153 ಜಯನಗರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಜಯನಗರ ವಾರ್ಡ್–153 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ವರಲಕ್ಷಮ್ಮ ಎಲ್. ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:06/06/2022 ಸೋಮವಾರದಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಶ್ರೀಮತಿ. ವರಲಕ್ಷಮ್ಮ ಎಲ್. ನೋಡಲ್ ಅಧಿಕಾರಿ ರವರು.
2. ಶ್ರೀ. ನವೀನ್‌ಕುಮಾರ್ ಕೆ. ಕಾರ್ಯದರ್ಶಿ.
3. ಡಾ|| ಶರಣಪ್ಪ, ವೈದ್ಯಾಧಿಕಾರಿಗಳು, ಜಯನಗರ.
4. ಶ್ರೀ. ವಿಜಯಕುಮಾರ್ ಜಿ. ಕಿರಿಯ ಅಭಿಯಂತರರು BESCOM.
5. ಶ್ರೀಮತಿ. ಶ್ರೀಜಾ, ಸಹಾಯಕ ಅಭಿಯಂತರರು, ವಿದ್ಯುತ್ (ದಕ್ಷಿಣ).
6. ಶ್ರೀಮತಿ. ಭೂದೇವಿ, ಪರಿವೀಕ್ಷಕರು ತೋಟಗಾರಿಕೆ ಇಲಾಖೆ.
7. ಶ್ರೀ. ಜಿ. ಮೂರ್ತಿ, ಸಹಾಯಕ ಅಭಿಯಂತರರು ವಿದ್ಯುತ್ (ದಕ್ಷಿಣ)
8. ಶ್ರೀ. ಮಹದೇವಯ್ಯ, ಎ.ಎಸ್.ಐ, ಜಯನಗರ ಸಂಚಾರ ಪೊಲೀಸ್ ಠಾಣೆ.
9. ಶ್ರೀ. ಜಿ.ಟಿ. ಬೊಮ್ಮೇಗೌಡ, ಕೆಲಸ ಪರಿವೀಕ್ಷಕರು ವಾರ್ಡ್–153
10. ಶ್ರೀ. ರವೀಂದ್ರ ಹಿಜೇರಿ, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–153.
11. ಶ್ರೀ. ಜಯಕೃಷ್ಣನ್, ಶ್ರೀ. ಫಜಲ್ ಖಾನ್, ಶ್ರೀ. ಅನೀಸ್ ಅಹಮದ್, ಶ್ರೀ. ಭೀಮಪ್ಪ ಶ್ರೀ. ಬಹದ್ದೂರ್ ಬಿ.ಎಂ., ಶ್ರೀ. ಸಲಾವುದ್ದೀನ್ ಮತ್ತು ಶ್ರೀ. ಸಮೀಉಲ್ಲಾ (ಸಾರ್ವಜನಿಕರು).

**ಸಭೆಗೆ ಗೈರು ಹಾಜರಾದ ಇಲಾಖೆಗಳು:–**

1. ಅರಣ್ಯ ಇಲಾಖೆಯ ಅಧಿಕಾರಿಗಳು.
2. ಪೊಲೀಸ್ ಇನ್ಸ್‌ಪೆಕ್ಟರ್ ಮೈಕೋಲೇಔಟ್ & ಬಸವನಗುಡಿ ಸಂಚಾರ ಪೊಲೀಸ್ ಠಾಣೆ.
3. ಪೊಲೀಸ್ ಇನ್ಸ್‌ಪೆಕ್ಟರ್, ಸಿದ್ದಾಪುರ, ತಿಲಕ್‌ನಗರ ಮತ್ತು ಬಸವನಗುಡಿ ಕಾನೂನು ಸುವ್ಯವಸ್ಥೆ.

**********



Scanned with CamScanner

1. ವಾರ್ಡ್‌–153 ರ ಕುಂದು ಕೊರತೆಗಳ ಬಗ್ಗೆ ಚರ್ಚಿಸುವ ಸಂಬಂಧ ದಿನಾಂಕ:06/06/2022 ಸೋಮವಾರದಂದು ಬೆಳಗ್ಗೆ 11.00 ಗಂಟೆಗೆ ನಿಗಧಿತ ಸಮಯಕ್ಕೆ ಸಭೆಯನ್ನು ಪ್ರಾರಂಭಿಸಲಾಯಿತು.

2. ನೋಡಲ್ ಅಧಿಕಾರಿಯವರು ಮಾತನಾಡಿ ಸಭೆಯಲ್ಲಿ ಹಾಜರಿದ್ದ ವೈದ್ಯರೊಂದಿಗೆ ಚರ್ಚಿಸಿ ಭೂಸ್ಟರ್ ಡೋಸ್ ವ್ಯಾಕ್ಸಿನೇಷನ್ ಅನ್ನು ಸಮರ್ಪಕವಾಗಿ ನೀಡುತ್ತಿರುವ ಬಗ್ಗೆ ವಿಚಾರಿಸಿದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಡಾ॥ ಶರಣಪ್ಪ ವೈದ್ಯಾಧಿಕಾರಿಯವರು ಸಮರ್ಪಕವಾಗಿ ವ್ಯಾಕ್ಸಿನೇಷನ್ ಹಾಕುತ್ತಿದ್ದು, ದಿನಾಂಕ:07–06–2022 ರಂದು ವಾರ್ಡ್ ವ್ಯಾಪ್ತಿಯ ಶಾಲೆಗಳಲ್ಲಿ ವ್ಯಾಕ್ಸಿನ್ ಮೇಳ ಹಮ್ಮಿಕೊಂಡಿರುತ್ತೇವೆಂದು ಸಭೆಗೆ ತಿಳಿಸಿದರು. ನಂತರ ನೋಡಲ್ ಅಧಿಕಾರಿಯವರು ಮಾತನಾಡಿ ಹಾಲಿ ಮಳೆಗಾಲ ಹೆಚ್ಚಾಗಿರುವುದರಿಂದ ಡೆಂಗ್ಯೂ ಬಗ್ಗೆ ಕೈಗೊಂಡಿರುವ ಕ್ರಮಗಳ ಕುರಿತು ತಿಳಿಸಲು ಕೋರಿದರು. ಈ ಬಗ್ಗೆ ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ವೈದ್ಯರು ಮಾತನಾಡಿ ಎಲ್ಲಿ ಹೆಚ್ಚು ಡೆಂಗ್ಯೂ ಕೇಸ್‌ಗಳು ಬರುತ್ತಿದೆಯೋ ಅಂತಹ ಜಾಗಗಳಲ್ಲಿ ಹೆಚ್ಚಾಗಿ ಔಷದಿ ಸಿಂಪಡಿಸಲಾಗುತ್ತಿದೆ. ಉಳಿದಂತೆ ಸ್ಲಂ ಪ್ರದೇಶ ವ್ಯಾಪ್ತಿಯಲ್ಲಿ ಔಷದಿ ಸಂಪಡಿಸುತ್ತಿರುವುದಾಗಿ ತಿಳಿಸಿದರು. ನಂತರ ನೋಡಲ್ ಅಧಿಕಾರಿಯವರು ಮಾತನಾಡಿ ಈ ಬಗ್ಗೆ ಸಾರ್ವಜನಿಕರಿಗೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕಾಗಿರುವುದರಿಂದ ಪ್ರತಿ ದಿನ ಮನೆ–ಮನೆಗೆ ತೆರಳುವ ಕಸ ಸಂಗ್ರಹಣೆ ಆಟೋಗಳಲ್ಲಿ ಪ್ರಚಾರ ಮಾಡಿ ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳುವಂತೆ ಹಾಗೂ ಕೋವಿಡ್ ಟೆಸ್ಟ್‌ಗಳ ಬಗ್ಗೆಯೂ ಸಹ ಅರಿವು ಮೂಡಿಸುವಂತೆ ಕ್ರಮ ಕೈಗೊಳ್ಳಲು ವೈದ್ಯರಿಗೆ ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸಭೆಯಲ್ಲಿ ತಿಳಿಸಿದರು.

**ಕ್ರಮ : ವೈದ್ಯಾಧಿಕಾರಿಗಳು & ಹಿ.ಆ.ಪ**

3. ನೋಡಲ್ ಅಧಿಕಾರಿಯವರು ಮಾತನಾಡಿ ಸಭೆಯಲ್ಲಿ ಹಾಜರಿದ್ದ ಶ್ರೀ. ಜಿ. ಮೂರ್ತಿ, ಸಹಾಯಕ ಅಭಿಯಂತರರು, ವಿದ್ಯುತ್ (ದಕ್ಷಿಣ) ರವರನ್ನು ಕುರಿತು ಕಳೆದ ಸಭೆಯಲ್ಲಿ ತಿಳಿಸಿದ್ದ ದೂರುಗಳಾದ ಗುಲ್ಬರ್ಗ ಕಾಲೋನಿ ಎಸ್.ಆರ್.ಕೆ ಗಾರ್ಡನ್ ಸುತ್ತ–ಮುತ್ತ ಸ್ಟ್ರೀಟ್ ಲೈಟ್ ಬದಲಾಯಿಸುವ ಕುರಿತು ಕೈಗೊಂಡ ಕ್ರಮಗಳ ಬಗ್ಗೆ ವಿಚಾರಿಸಿದರು. ಈ ಬಗ್ಗೆ ಶ್ರೀ. ಜಿ. ಮೂರ್ತಿ ರವರು ಮಾತನಾಡಿ ಕಾರಣಾಂತರಗಳಿಂದ ಸದರಿ ದೂರುಗಳನ್ನು ಪರಿಹರಿಸಲು ಸಾಧ್ಯವಾಗಿರುವುದಿಲ್ಲ. ಈ ಸಭೆ ಮುಗಿದ ತಕ್ಷಣವೇ ಸದರಿ ಸ್ಥಳಗಳಿಗೆ ಭೇಟಿ ನೀಡಿ ಸಮಸ್ಯೆ ಭಗೆಹರಿಸುವುದಾಗಿ ಸಭೆಗೆ ತಿಳಿಸಿದರು. ಈ ಕುರಿತು ನೋಡಲ್ ಅಧಿಕಾರಿಯವರು ಮಾತನಾಡಿ ತಾವು ಈ ದಿನ ಪರಿಹರಿಸದಿದ್ದಲ್ಲಿ ತಮ್ಮ ವಿರುದ್ಧ ಕ್ರಮ ಕೈಗೊಳ್ಳಲು ಮೇಲಾಧಿಕಾರಿಗಳಿಗೆ ವರದಿ ಸಲ್ಲಿಸಲಾಗುವುದು ಹಾಗೂ ತಮಗೆ ನೋಟಿಸ್ ಜಾರಿಮಾಡಲಾಗುವುದು ಎಂದು ತಿಳಿಸಿದರು.

**ಕ್ರಮ : ಕಾರ್ಯಪಾಲಕ ಅಭಿಯಂತರರು (ವಿದ್ಯುತ್–ದಕ್ಷಿಣ)**



Scanned with CamScanner

4. ವಾರ್ಡ್ 153ರ ಸ್ಥಳಿಯರಾದ ಅನೀಸ್ ಅಹಮದ್ ರವರು ಮಾತನಾಡಿ ಕಳೆದ ವಾರ್ಡ್ ಸಮಿತಿ ಸಭೆಯಲ್ಲಿ ತಿಳಿಸಿದ್ದ ಸಮಸ್ಯೆಗಳಾದ ಮ್ಯಾನ್‌ಹೋಲ್ ಚೇಂಬರ್ ಸರಿಪಡಿಸುವುದು ಮತ್ತು ಬೆಸ್ಕಾಂ ರವರು ಹೊಸದಾಗಿ ಪೋಲ್ ಬದಲಾಯಿಸಲು ಸಲ್ಲಿಸಿದ್ದ ದೂರುಗಳನ್ನು ಬೆಸ್ಕಾಂ ಅಧಿಕಾರಿಗಳು ಹಾಗೂ ಬಿ.ಡಬ್ಲ್ಯೂ ಎಸ್‌ಎಸ್‌ಬಿ ಅಧಿಕಾರಿಗಳು ಸರಿಪಡಿಸಿರುವುದಾಗಿ ತಿಳಿಸಿ ಅಭಿನಂದನೆ ಮತ್ತು ಹರ್ಷ ವ್ಯಕ್ತಪಡಿಸಿದರು.

5. ವಾರ್ಡ್ 153ರ ಸ್ಥಳೀಯರಾದ ಭೀಮಪ್ಪ ರವರು ಮಾತನಾಡಿ ಗುಲ್ಬರ್ಗ ಕಾಲೋನಿಯಲ್ಲಿ ಹೊಸ ವಿದ್ಯುತ್ ಕಂಬವನ್ನು ಅಳವಡಿಸುವಂತೆ ಕೋರಿದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಶ್ರೀ. ವಿಜಯಕುಮಾರ್ ಬೆಸ್ಕಾಂ ಅಭಿಯಂತರರಿಗೆ ತಿಳಿಸಲಾಗಿ ಸದರಿಯವರು ಪ್ರಸ್ತಾಪಿತ ಸ್ಥಳವು ಶ್ರೀ. ಪ್ರಕಾಶ್, ಸಹಾಯಕ ಅಭಿಯಂತರರಿಗೆ ಸಂಬಂಧಿಸಿರುವುದರಿಂದ ಸದರಿಯವರಿಗೆ ಕ್ರಮ ಕೈಗೊಳ್ಳಲು ತಿಳಿಸಲಾಗುವುದೆಂದು ಸಭೆಗೆ ತಿಳಿಸಿದರು.

**ಕ್ರಮ: ಸಹಾಯಕ ಅಭಿಯಂತರರು, ಬೆಸ್ಕಾಂ**

6. ನೋಡಲ್ ಅಧಿಕಾರಿಯವರು ಮಾತನಾಡಿ ಮಳೆಗಾಲದಲ್ಲಿ ಒಳಚರಂಡಿ ಮ್ಯಾನ್‌ಹೋಲ್ ಚೇಂಬರ್‌ಗಳು ಉಕ್ಕುತ್ತಿರುತ್ತವೆ ಇದಕ್ಕೆ ಪರಿಹಾರವೇನು ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. ಈ ಬಗ್ಗೆ BWSSB ಅಭಿಯಂತರು ಮಾತನಾಡಿ ಮನೆಗಳ ಮೇಲೆ ಬೀಳುವ ಮಳೆನೀರನ್ನು ಒಳಚರಂಡಿಗೆ ಸಂಪರ್ಕ ನೀಡಿರುವ ಕಾರಣ ಮಳೆ ಬರುವ ಸಮಯದಲ್ಲಿ ಮ್ಯಾನ್‌ಹೋಲ್‌ಗಳು ಸಹಜವಾಗಿ ಉಕ್ಕುತ್ತವೆ ಎಂದು ಸಭೆಗೆ ತಿಳಿಸಿದರು.

7. ವಾರ್ಡ್ 153ರ ಸ್ಥಳೀಯರಾದ ಶ್ರೀ. ಸಮೀಉಲ್ಲಾ ರವರು ಮಾತನಾಡಿ ಕಳೆದ ಸಭೆಯಲ್ಲಿ ಕೋರಿದ್ದ ಒಳಚರಂಡಿ ಪೈಪ್ ಅಳವಡಿಸುವ ನಮ್ಮ ಮನವಿಯನ್ನು ಬಿಬಿಎಂಪಿ ಅಧಿಕಾರಿಗಳು ಪರಿಹರಿಸಿರುತ್ತಾರೆ ಎಂದು ತಿಳಿಸಿ ಅಭಿನಂದನೆ ಹಾಗೂ ಹರ್ಷ ವ್ಯಕ್ತ ಪಡಿಸಿದರು. ನಂತರ ಸದರಿ 26ನೇ ಮುಖ್ಯರಸ್ತೆಯಲ್ಲಿ ಟ್ರಾಫಿಕ್ ಸಮಸ್ಯೆ ಬಹಳವಾಗಿದೆ ಎಂದು ತಿಳಿಸಿ ಇದನ್ನು ಬಗೆಹರಿಸುವಂತೆ ಸಭೆಯಲ್ಲಿ ಪ್ರಸ್ತಾಪಿಸಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಟ್ರಾಫಿಕ್ ಪೋಲೀಸ್ ರವರಿಗೆ ಸಮಸ್ಯೆ ಬಗೆಹರಿಸಲು ತಿಳಿಸಿಸುವುದಾಗಿ ಸಭೆಯಲ್ಲಿ ತಿಳಿಸಿದರು.

**ಕ್ರಮ:ಮೈಕೋಲೇಔಟ್ ಪೋಲೀಸ್ ಠಾಣೆ**



Scanned with CamScanner

8. ವಾರ್ಡ್ 153ರ ಸ್ಥಳೀಯರಾದ ಶ್ರೀ. ಸಲಾವುದ್ದಿನ್ ರವರು ಮಾತನಾಡಿ ಬಿ.ಹೆಚ್.ಇ.ಎಲ್ ಲೇಔಟ್ ಸುತ್ತ–ಮುತ್ತ ಇರುವ ಮೋರಿಗಳನ್ನು ಡಿಸಿಲ್ಟ್ ಮಾಡುವಂತೆ ಕೋರಿದರು. ಈ ಬಗ್ಗೆ ವಾರ್ಡ್ ಅಭಿಯಂತರರು ಮಾತನಾಡಿ ಈಗಾಗಲೇ 21–22ನೇ ಸಾಲಿನ ಕಾರ್ಯಕ್ರಮ ಪಟ್ಟಿಯಲ್ಲಿ ಬಿ.ಹೆಚ್.ಇ.ಎಲ್ ಲೇಔಟ್ ಸುತ್ತ–ಮುತ್ತ ಡಿಸಿಲ್ಟ್ ಮಾಡುವ ಕಾಮಗಾರಿಗೆ ಅಂದಾಜು ಪಟ್ಟಿಯನ್ನು ತಯಾರಿಸುತ್ತಿರುವುದಾಗಿ ಸಭೆಗೆ ತಿಳಿಸಿದರು.

ಕ್ರಮ : ವಾರ್ಡ್ ಅಭಿಯಂತರರು

9. ವಾರ್ಡ್ ಅಭಿಯಂತರರು ಮಾತನಾಡಿ ಶ್ರೀ. ರಘುನಾಥ್ ಜಯನಗರ 1ನೇ ಬ್ಲಾಕ್‌ನ ನಿವಾಸಿಯವರು ದೂರವಾಣಿ ಕರೆ ಮಾಡಿ ಮಾಧವನ್ ಪಾರ್ಕ್ ಬಳಿ ಒಂದು ಬದಿ ಮಾತ್ರ ಪಾರ್ಕಿಂಗ್ ಮಾಡಿ ಮತ್ತೊಂದು ಬದಿಗೆ ನೋ–ಪಾರ್ಕಿಂಗ್ ಬೋರ್ಡ್ ಅಳವಡಿಸುವಂತೆ ಮತ್ತು ದೇವಿ ಇಂಟರ್‌ನ್ಯಾಷನಲ್ ಷೋರೂಂ ಪಾದಚಾರಿ ರಸ್ತೆಯ ಮೇಲೆ ನಿಲ್ಲಿಸುತ್ತಿರುವ ವಾಹನಗಳನ್ನು ತೆರವುಗೊಳಿಸುವ ಕುರಿತು ಹಾಗೂ ಅಪೋಲೋ ಆಸ್ಪತ್ರೆ ಬಳಿ ಅಳವಡಿಸಿದ್ದ ಬ್ಯಾರಿಕೇಡ್‌ಗಳನ್ನು ಮಾವು ಮೇಳ ಮಾಡುವ ಸಲುವಾಗಿ ಕೊಂಡೊಯ್ದಿರುತ್ತಾರೆ. ಸದರಿ ಬ್ಯಾರಿಕೇಡ್‌ಳನ್ನು ಪುನಃ ತಂದು ಹಾಕುವಂತೆ ಮನವಿ ಸಲ್ಲಿಸಿ ಈ ಮೂರು ವಿಷಯಗಳನ್ನು ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸುವಂತೆ ಕೋರಿರುತ್ತಾರೆಂದು ವಾರ್ಡ್ ಅಭಿಯಂತರರು ಸಭೆಯಲ್ಲಿ ಪ್ರಸ್ತಾಪಿಸಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸಭೆಯಲ್ಲಿ ಹಾಜರಿದ್ದ ಜಯನಗರ ಸಂಚಾರ ಪೊಲೀಸ್ ಠಾಣೆ ಎ.ಎಸ್.ಐ ರವರಿಗೆ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಿದರು.

ಕ್ರಮ: ಜಯನಗರ ಸಂಚಾರ ಪೊಲೀಸ್ ಠಾಣೆ

10. ಜಯನಗರ ಸಂಚಾರ ಪೊಲೀಸ್ ಠಾಣೆಯ ಎ.ಎಸ್.ಐ ಆದ ಶ್ರೀ. ಮಹದೇವಯ್ಯ ರವರು ಮಾತನಾಡಿ ಟಿ. ಮರಿಯಪ್ಪ ರಸ್ತೆಯಲ್ಲಿರುವ ತೋಳು ಮೋರಿಗಳನ್ನು ಶುಚಿ ಮಾಡುವಂತೆ ಕೋರಿದರು. ನೋಡಲ್ ಅಧಿಕಾರಿಯವರು ಮಾತನಾಡಿ ವಾರ್ಡಿನ ಅಭಿಯಂತರರಿಗೆ ಗ್ಯಾಂಗ್‌ಮೆನ್‌ಗಳನ್ನು ಬಿಟ್ಟು ಶುಚಿ ಮಾಡುವಂತೆ ತಿಳಿಸಿದರು.

ಕ್ರಮ : ವಾರ್ಡ್ ಅಭಿಯಂತರರು



Scanned with CamScanner

11. ತೋಟಗಾರಿಗೆ ಇಲಾಖೆಯ ಪರಿವೀಕ್ಷಕರಾದ ಶ್ರೀಮತಿ. ಭೂದೇವಿ ರವರು ಮಾತನಾಡಿ ಕೃಷ್ಣರಾವ್ ಪಾರ್ಕ್‌ನಲ್ಲಿ ಸೊಳ್ಳೆಗಳು ಹೆಚ್ಚಾಗಿದ್ದು, ಔಷಧಿ ಸಿಂಪಡಿಸುವಂತೆ ಕೋರಿದರು. ನೋಡಲ್ ಅಧಿಕಾರಿಯವರು ಮಾತನಾಡಿ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಕೃಷ್ಣರಾವ್ ಪಾರ್ಕಿನಲ್ಲಿ ಔಷಧಿ ಸಿಂಪಡಿಸುವಂತೆ ತಿಳಿಸಿದರು

ಕ್ರಮ : ಹಿರಿಯ ಆರೋಗ್ಯ ಪರಿವೀಕ್ಷಕರು

ಮೇಲಿನ ಎಲ್ಲಾ ಅಂಶಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಹಾಜರಿದ್ದ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ ತಿಳಿಸಿ ಮುಂದಿನ ಸಭೆಗೆ ಕಡ್ಡಾಯವಾಗಿ ಗೈರುಹಾಜರಾಗಿರುವ ಇತರೆ ಇಲಾಖೆಯವರು ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ತಿಳಿಸುತ್ತಾ ಸಭೆ ಮುಕ್ತಾಯಗೊಳಿಸಲಾಯಿತು.

(ನವೀನ್‌ಕುಮಾರ್ ಕೆ.)
ಕಾರ್ಯದರ್ಶಿ
ವಾರ್ಡ್-153 ಜಯನಗರ

(ವರಲಕ್ಷ್ಮಮ್ಮ ಎಲ್)
ನೋಡಲ್ ಅಧಿಕಾರಿ
ವಾರ್ಡ್-153 ಜಯನಗರ



Scanned with CamScanner